ಕರ್ನಾಟಕ ವಿಧಾನಪರಿಷತ್ತಿನ ಮಾನ್ಯ ಸದ್ಯಸರಾದ ಶ್ರೀ ಎಸ್.ರವಿ ರವರು ನಿಯಮ **72** ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ:-

ವಿಷಯ: ಬೆಂಗಳೂರು ನಗರದಲ್ಲಿರುವ ವಿಕ್ಟೋರಿಯಾ ಆಸ್ಪತ್ರೆಗೆ ಪ್ರತಿದಿನ 1000 ರಿಂದ 1500 ರೋಗಿಗಳು ಚಿಕಿತ್ಸೆಗಾಗಿ ಆಗಮಿಸುತ್ತಿದ್ದು, ಚಿಕಿತ್ಸೆಗಾಗಿ ಬರುವ ರೋಗಿಗಳನ್ನು ದಾಖಲಾತಿ ಮಾಡಿಕೊಳ್ಳಲು ಸಾಕಷ್ಟು ವಿಳಂಬ ಮಾಡುತ್ತಿರುವುದರಿಂದ, ರೋಗಿಗಳಿಗೆ ತಕ್ಷಣ ಚಿಕಿತ್ಸೆ ಸಿಗದೆ ಸಾವುಗಳು ಉಂಟಾಗುತ್ತಿರುವ ಬಗ್ಗೆ ಮತ್ತು ರೋಗಿಗಳೊಂದಿಗೆ ಬಂದಿರುವವರಿಗೆ ಇಲ್ಲಿ ತಂಗಲು ಯಾವುದೇ ಸೂಕ್ತ ವ್ಯವಸ್ಥೆಗಳು ಇಲ್ಲದೆ ಇರುವುದರಿಂದ, ಇವರು ಆಸ್ಪತ್ರೆಯ ಸುತ್ತಮುತ್ತಲಿನ ರಸ್ತೆಗಳಲ್ಲಿ ಸಮಯ ಕಳೆಯಬೇಕಾದಂತಹ ದುಸ್ಥಿತಿಯ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

****

ಉತ್ತರ:-

ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ಅಧೀನದ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿ ವಿಕ್ಟೋರಿಯಾ ಆಸ್ಪತ್ರೆ, ವಾಣಿವಿಲಾಸ ಆಸ್ಪತ್ರೆ, ಮಿಂಟೋ ಆಸ್ಪತ್ರೆ, ಪಿ.ಎಂ.ಎಸ್ ಎಸ್.ವೈ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಟ್ರಾಮಾ ಕೇರ್ ಕೇಂದ್ರಗಳು ಅಲ್ಲದೆ, ನೆಫ್ರೋ-ಯುರಾಲಜಿ ಸಂಸ್ಥೆ, ಸರ್ಕಾರಿ ದಂತ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಇನ್ಸ್ಟಿಟ್ಯೂಟ್ ಆಫ್ ಗ್ಯಾಸ್ಟ್ರೋಎಂಟರಾಲಜಿ ಸೈನ್ಸಸ್ ಮತ್ತು ಆರ್ಗನ್ ಟ್ರಾನ್ಸ್‌ಪ್ಲಾಂಟ್ ಸಂಸ್ಥೆಗಳು ಇರುವುದರಿಂದ ಇಲ್ಲಿಗೆ ಪ್ರತಿದಿನ ಆಸ್ಪತ್ರೆಗೆ ಬರುವ ರೋಗಿಗಳ ಸಂಖ್ಯೆ ಹೆಚ್ಚಾಗಿರುತ್ತದೆ. ವಿಕ್ಟೋರಿಯಾ ಆಸ್ಪತ್ರೆಗೆ ಬರುವ ರೋಗಿಗಳಿಗೆ ಬೆಳಿಗ್ಗೆ 9.00 ರಿಂದ ಸಂಜೆ 4.00 ಗಂಟೆಯವರೆಗೆ ಹೊರರೋಗಿ ವಿಭಾಗದಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು, ಅಗತ್ಯವಿರುವ ರೋಗಿಗಳಿಗೆ ಆಸ್ಪತ್ರೆಯಲ್ಲಿ ದಾಖಲಿಸಿ ಚಿಕಿತ್ಸೆಯನ್ನು ಮುಂದುವರೆಸಲಾಗುತ್ತಿರುತ್ತದೆ. ಸಂಜೆ 4.00 ಗಂಟೆಯ ನಂತರ ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿರುವ ಟ್ರಾಮಾ ಕೇರ್ ಕೇಂದ್ರದ ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಇದರಿಂದಾಗಿ ರೋಗಿಗಳಿಗೆ ನೀಡುತ್ತಿರುವ ಚಿಕಿತ್ಸೆಯಲ್ಲಿ ಯಾವುದೇ ವಿಳಂಬವಾಗುತ್ತಿಲ್ಲ.

ರೋಗಿಗಳೊಂದಿಗೆ ಬರುವ ಪರಿಚಾರಕರುಗಳಿಗೆ ತಂಗಲು ವಿಕ್ಟೋರಿಯಾ ಆಸ್ಪತ್ರೆಯ ಆವರಣದಲ್ಲಿ ವಿಶ್ರಾಂತಿಧಾಮದ ವ್ಯವಸ್ಥೆ ಇದ್ದು, ಇಲ್ಲಿ ದೂರದ ಊರುಗಳಿಂದ ಚಿಕಿತ್ಸೆಗಾಗಿ ಬರುವ ರೋಗಿಗಳ ಸಂಬಂಧಿಕರುಗಳು ಇದರ ಉಪಯೋಗ ಪಡೆಯುತ್ತಿರುತ್ತಾರೆ ಹಾಗೂ ಈ ಸಂಸ್ಥೆಯ ಅಧೀನದ ಎಲ್ಲಾ ಆಸ್ಪತ್ರೆಗಳಲ್ಲೂ ರೋಗಿಗಳಿಗೆ ಊಟ ಮಾಡಲು, ದಣಿವಾರಿಸಿಕೊಳ್ಳಲು ಕಾಯುವ ಕೊಠಡಿ ಸೌಲಭ್ಯವು ಸಹ ಲಭ್ಯವಿರುತ್ತದೆ.

ಸಂಖ್ಯೆ: ಎಂಇಡಿ 705 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು